ಅಪರ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ ನ್ಯಾಯಾಲಯ, ಚನ್ನಪಟ್ಟಣ

CC No : 1028/2014

CW.8 PW.4

**ಹೆಸರು:** ಪದ್ಮನಾಭ ಜೆ ಜೆ
ತಂದೆ : ಲೇಟ್ ಜೆ ಎಂ ಗೋಪಾಲಕೃಷ್ಣ
ವಯಸ್ಸು : 53 ವರ್ಷ
ಉದ್ಯೋಗ : ಪ್ರಧಾನ ವ್ಯವಸ್ಥಾಪಕರು ಡಾ. ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಬೆಂಗಳೂರು
ವಾಸ : ಬೆಂಗಳೂರು

ಸಾಕ್ಷಿಯನ್ನುಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆ ಎ.ಪಿ.ಪಿ ಯವರಿಂದ: ದಿ:04.11.2022

ನಾನು 2013-2014 ನೇ ಸಾಲಿನಲ್ಲಿ 9 ತಿಂಗಳ ಅವದಿಯ ವರೆಗೆ ಚನ್ನಪಟ್ಟಣ ನಗರಸಭೆ ಪೌರಾಯುಕ್ತರಾಗಿ ಅಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಆರೋಪಿಗೆ ಸಂಬಂಧಿಸಿದಂತೆ ಯಾವುದಾದರೂ ಸ್ವತ್ತು ಇರುವ ಬಗ್ಗೆ ಮಾಹಿತಿ ಕೇಳಿ ಚನ್ನಪಟ್ಟಣ ಪೂರ್ವ ಪೋಲೀಸ್ ಠಾಣೆಯವರು ಮನವಿಯನ್ನು ಸಲ್ಲಿಸಿರುತ್ತಾರೆ. ನಗರಸಭೆಯಲ್ಲಿ ಲಭ್ಯ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಸದರಿ ವ್ಯಕ್ತಿಯ ಹೆಸರಿನಲ್ಲಿ ಯಾವುದೇ ಸ್ವತ್ತುಗಳು ಇಲ್ಲ ಎಂದು ದಿ.29.07.2013 ರಂದು ವರದಿಯನ್ನು ಸಲ್ಲಿಸಿರುತ್ತೇನೆ. ಸದರಿ ವರದಿಯನ್ನು ನಿಪಿ-4 ಎಂದು ಗುರುತಿಸಲಾಯಿತು. ನಿಪಿ-4 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4 ಎ ಎಂದು ಗುರುತಿಸಲಾಯಿತು.

ಪಾಟೀ ಸವಾಲು: ಆರೋಪಿ ಪರ: ಶ್ರೀ ಹೆಚ್ ಕೆ ವಕೀಲರಿಂದ:

ಪೋಲೀಸರು ನಿಮಗೆ ಯಾವುದೇ ಮನವಿ ಪತ್ರವನ್ನು ಸಲ್ಲಿಸಿಲ್ಲ ಮತ್ತು ಅದಕ್ಕೆ ನೀವು ವರದಿಯನ್ನು ಸಲ್ಲಿಸಿರುವುದಿಲ್ಲ ಎಂದರೆ ಸಾಕ್ಷಿ ಸರ್ಕಾರಿ ಅಧಿಕಾರಿಯಾಗಿ ಲಿಖಿತವಾಗಿ ಮನವಿ ಸಲ್ಲಿಸದೇ ಇದ್ದರೇ ನಾವು ಯಾವುದೇ ವರದಿಯನ್ನು ನೀಡುವುದಿಲ್ಲ ಎಂದು ನುಡಿಯುತ್ತಾರೆ. ನಾನು ಪೋಲೀಸರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಓ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಚನ್ನಪಟ್ಟಣ.